Date :02.06.2026

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಂದುವರಿದ ಮುಖ್ಯ ವಿಚಾರಣೆ – ಅರ್ಜಿದಾರರ ಪರ ಶ್ರೀ ಎನ್.ಡಿ.ಎಂ. ವಕೀಲರ ಪರ ಶ್ರೀಮತಿ ಹೆಚ್.ಆರ್.ಎನ್. ವಕೀಲರಿಂದ –**

ನಾನು ಈ ಕೇಸಿನಲ್ಲಿ 3 ನೇ ಅರ್ಜಿದಾರನಿದ್ದು, 1 ಮತ್ತು 2 ನೇ ಅರ್ಜಿದಾರರು ಕ್ರಮವಾಗಿ ನನ್ನ ಅಣ್ಣ ಮತ್ತು ಅತ್ತಿಗೆ ಇದ್ದು, ನನ್ನ ಮುಖ್ಯವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸರಿ ಇರುತ್ತವೆ.

ನನ್ನ ಸಾಕ್ಷಿಗೆ ಬೆಂಬಲಿತವಾಗಿ, ನಮ್ಮ ಮಾಲೀಕತ್ವದ ಜಮೀನಿನ ಬಗ್ಗೆ ಇರುವ 2 ಪಹಣಿ ಪ್ರತಿ ಹಾಗೂ ದಿಃ 21.06.2021 ರ ದಿನಾಂಕದ ಅವಾರ್ಡ ನೋಟೀಸಿನ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–1 ರಿಂದ 3 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮುಂದುವರಿದ ಮುಖ್ಯವಿಚಾರಣೆಗಾಗಿ ವಕೀಲರು ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಿ ಮುಂದುವರಿದ ಮುಖ್ಯವಿಚಾರಣೆಗೆ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ)

*ಓದಿ ಹೇಳಿ ಕೇಳಿ ಸರಿ ಇದೆ.*

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ